**12) ಲಿಖಿತ ಪರೀಕ್ಷೆ:**

**12.1) ಅಭ್ಯರ್ಥಿಯು ದೇಹದಾರ್ಢ್ಯತೆ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಗಳಲ್ಲಿ ಉತ್ತೀರ್ಣರಾದರೆ ಮಾತ್ರ ಲಿಖಿತ ಪರೀಕ್ಷೆಗೆ ಕರೆಯಲಾಗುವುದು.**

**ಪ್ರಶ್ನೆ ಪತ್ರಿಕೆ–1 ಸಾಮಾನ್ಯ ಜ್ಞಾನ (ಆಂಗ್ಲ ಅಥವಾ ಕನ್ನಡ) ಗರಿಷ್ಠ ಅಂಕಗಳು 100**

**ಪ್ರಶ್ನೆ ಪತ್ರಿಕೆ–2 ವಿಜ್ಞಾನ ಮತ್ತು ಆಪ್ಟಿಟ್ಯೂಡ್ ಪರೀಕ್ಷೆ(Science & Aptitude Test)(ಆಂಗ್ಲ ಅಥವಾ ಕನ್ನಡ) ಗರಿಷ್ಠ ಅಂಕಗಳು 100**

**(ಪ್ರಶ್ನೆ ಪತ್ರಿಕೆ–1 ಮತ್ತು ಪ್ರಶ್ನೆ ಪತ್ರಿಕೆ–2 Objective type ಇರುವುದು ಹಾಗೂ ಪರೀಕ್ಷೆಗಳ ಕಾಲಾವಧಿ ಪ್ರತಿಯೊಂದು ಪತ್ರಿಕೆಗೆ 1 ಗಂಟೆ 30 ನಿಮಿಷಗಳು ಮಾತ್ರ.)**

12.2) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು. ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿ ಮಾಡುವ ಬಗ್ಗೆ ಕೆಲವು ಮುಖ್ಯವಾದ ಮಾರ್ಗಸೂಚನೆಗಳನ್ನು ನೀಡುವರು.

12.3) ನೇಮಕಾತಿ ಸಮಿತಿಯ ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಅಥವಾ ನಕಲು ಮಾಡಿದ್ದು ಕಂಡುಬಂದರೆ ಅಥವಾ ನಕಲು ಮಾಡುವ ಸಾಮಗ್ರಿಗಳನ್ನು ಹೊಂದಿದ್ದರೆ ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು.

12.4) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಪೋನ್‌ಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಅಭ್ಯರ್ಥಿಗಳು ಮೊಬೈಲ್ ಫೋನುಗಳನ್ನು ಉಪಯೋಗಿಸಿದರೆ /ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

12.5) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಪೇಜರ್, ಕ್ಯಾಲ್ಕುಲೇಟರ್ ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.

12.6) **ದೇಹಾದಾರ್ಢ್ಯತೆ ಹಾಗೂ ದೈಹಿಕ ಸಾಮಾರ್ಥ್ಯ ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲಾ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯನ್ನು ಏಕಕಾಲದಲ್ಲಿ ಬೆಂಗಳೂರಿನ ಆಯ್ದ ಕೇಂದ್ರಗಳಲ್ಲಿ ನಡೆಸಲಾಗುವುದು.**

ಆಯ್ಕೆಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಪರೀಕ್ಷೆಯ ದಿನಾಂಕವನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ನೀಡಲಾಗುವುದು. **ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.**

12.7) **ಆನ್‌ಲೈನ್ ಮುಖಾಂತರ ಮಾತ್ರ ಅರ್ಜಿ ಸಲ್ಲಿಸಿರುವುದರಿಂದ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಪ್ರತ್ಯೇಕವಾಗಿ ಅಂಚೆ ಮುಖಾಂತರ ನೀಡಲಾಗುವುದಿಲ್ಲ.** ಆದ್ದರಿಂದ ಲಿಖಿತ ಪರೀಕ್ಷೆಯ ಕರೆಪತ್ರವನ್ನು ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.inನಿಂದ ಅಂತರ್ಜಾಲದ ಮುಖಾಂತರ ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು(Download). ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ www.ksp.gov.in ನ್ನು ದಿನನಿತ್ಯ ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ಲಿಖಿತ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.

12.8) **ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಬರುವಾಗ, ಕರೆಪತ್ರದ ಜೊತೆಗೆ ಪ್ಯಾರಾ 10.4ರಲ್ಲಿ ಹೇಳಲಾದ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸಬೇಕು.**

12.9) **ಲಿಖಿತ ಪರೀಕ್ಷೆಗೆ ತರಬೇಕಾದ ದಾಖಲೆಗಳು**

12.9.1) ಲಿಖಿತ ಪರೀಕ್ಷೆಯ ಕರೆಪತ್ರ,

12.9.2) ದೇಹದಾರ್ಢ್ಯತೆ ಪರೀಕ್ಷೆಯ ಫಲಿತಾಂಶ ಹಾಳೆ,

12.9.3) ಗುರುತಿನ ಚೀಟಿ,

12.9.4) ಆನ್‌ಲೈನ್ ಅರ್ಜಿಯ ಜೆರಾಕ್ಸ್ ಪ್ರತಿ ತರತಕ್ಕದ್ದು. ತಪ್ಪಿದಲ್ಲಿ ಲಿಖಿತ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ.

12.10) **ಸೂಚನೆಗಳು:**

12.10.1) ಅ) ಪ್ರಶ್ನೆ ಪತ್ರಿಕೆ ವಸ್ತುನಿಷ್ಠ (ಆಬ್ಜೆಕ್ಟೀವ್) ಮಾದರಿಯದಾಗಿರುತ್ತದೆ.

ಆ) ಪ್ರಶ್ನೆ ಪತ್ರಿಕೆಯಲ್ಲಿನ ಪ್ರಶ್ನೆಗಳಿಗೆ ಉತ್ತರಗಳನ್ನು ಓ.ಎಂ.ಆರ್ ಶೀಟ್‌ನಲ್ಲಿ **ಕಪ್ಪು ಅಥವಾ ನೀಲಿ** ಬಣ್ಣದ ಬಾಲ್‌ಪಾಯಿಂಟ್ ಪೆನ್ನಿನಿಂದ ಮಾತ್ರ ಗುರುತಿಸಬೇಕಾಗುತ್ತದೆ. ನಿಗಧಿತಜಾಗದಲ್ಲಿ ಪ್ರಶ್ನೆ ಪತ್ರಿಕೆಯ ಶ್ರೇಣಿ(ಎ,ಬಿ,ಸಿ ಇತ್ಯಾದಿ) ಹಾಗೂ ಅಭ್ಯರ್ಥಿಯ ಅರ್ಜಿ ಸಂಖ್ಯೆ, ರೋಲ್ ನಂಬರ್ ಮತ್ತು ಸಹಿಯನ್ನು ತಪ್ಪದೇ ಭರ್ತಿ/ನಮೂದು ಮಾಡಬೇಕು. ಇದನ್ನು ತುಂಬದಿದ್ದರೆ ಉತ್ತರಗಳನ್ನು ಮೌಲ್ಯಮಾಪನ ಮಾಡಲಾಗುವುದಿಲ್ಲ ಹಾಗೂ ಅಭ್ಯರ್ಥಿ ಆಯ್ಕೆಗೆ ಅನರ್ಹರಾಗುತ್ತಾರೆ. ಆದ್ದರಿಂದ ಅಭ್ಯರ್ಥಿಯು ಸರಿಯಾಗಿ ಮೇಲಿನ ಮಾಹಿತಿ/ವಿವರಗಳನ್ನು ಕಡ್ಡಾಯವಾಗಿ ಗುರುತಿಸಬೇಕು.

ಇ) ಅಭ್ಯರ್ಥಿಗಳು ಅರ್ಜಿ ಸಂಖ್ಯೆ, ರೋಲ್ ನಂಬರ್ ಇತ್ಯಾದಿ ಭರ್ತಿ ಮಾಡಿದ ನಂತರ ನಿಗಧಿತಜಾಗದಲ್ಲಿ ತಪ್ಪದೇ ಸಹಿ ಮಾಡಬೇಕು ಮತ್ತು ಎಡಗೈ ಹೆಬ್ಬೆಟ್ಟಿನ ಗುರುತು ಹಾಕಬೇಕು.

ಈ) ಅರ್ಜಿ ಸಂಖ್ಯೆ, ರೋಲ್ ನಂಬರ್ ಇತ್ಯಾದಿಗಳನ್ನು ಭರ್ತಿ ಮಾಡದೆ ಪರೀಕ್ಷೆ ಮುಗಿದ ನಂತರ ಅದನ್ನು ಪರಿಗಣಿಸುವಂತೆ ಕೋರಿದಲ್ಲಿ ಅಂತಹ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.

12.10.2) ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ನಿಗದಿಪಡಿಸಿರುವ ಸಮಯಕ್ಕಿಂತ ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೊಠಡಿಯಲ್ಲಿ ಹಾಜರಿರತಕ್ಕದ್ದು, ಆ ಸಮಯದಲ್ಲಿ ಪರೀಕ್ಷಾ ಮೇಲ್ವಿಚಾರಕರು ಉತ್ತರ ಪತ್ರಿಕೆಯನ್ನು ಭರ್ತಿಮಾಡುವ ಬಗ್ಗೆ ಕೆಲವು ಮಾರ್ಗ ಸೂಚನೆಗಳನ್ನು ನೀಡುವರು.

12.10.3) ನೇಮಕಾತಿ ಸಮಿತಿಯು ನಡೆಸುವ ಯಾವುದೇ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳಿಂದ ಅನುಚಿತ ವರ್ತನೆ ಅಥವಾ ನಕಲು ಮಾಡುವುದು ಕಂಡು ಬಂದರೆ ಅಥವಾ ನಕಲು ಮಾಡುವ ಸಾಮಗ್ರಿಯನ್ನು ಹೊಂದಿದ್ದರೆ, ಅಂತಹ ಅಭ್ಯರ್ಥಿಗಳನ್ನು 3 ವರ್ಷಗಳ ಕಾಲ ಡಿಬಾರ್ ಮಾಡಲಾಗುವುದು ಮತ್ತು ಅವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

12.10.4) ಪರೀಕ್ಷಾ ಕೇಂದ್ರದಲ್ಲಿ ಮೊಬೈಲ್ ಫೋನುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆ ಬರೆಯುವಾಗ ಮೊಬೈಲ್ ಫೋನ್‌ಗಳನ್ನು ಅಭ್ಯರ್ಥಿಗಳು ಹೊಂದಿದ್ದರೆ ಅವರನ್ನು ಅನರ್ಹಗೊಳಿಸಲಾಗುತ್ತದೆ.

12.10.5) ಎಲೆಕ್ಟ್ರಾನಿಕ್ ಸಾಮಗ್ರಿಗಳಾದ ಕ್ಯಾಲ್ಕುಲೇಟರ್/ವಾಚ್(ಕೈಗಡಿಯಾರ)ಇತ್ಯಾದಿಗಳನ್ನು ಪರೀಕ್ಷಾ ಕೊಠಡಿಗೆ ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.

12.10.6) ಪ್ರಶ್ನೆ ಪತ್ರಿಕೆಯಲ್ಲಿನ ಯಾವುದಾದರು ಪ್ರಶ್ನೆಯ ಬಗ್ಗೆ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲು ಆಯಾ ಪರೀಕ್ಷಾ ದಿನವೇ ಸಂಬಂಧಿತ ಪರೀಕ್ಷಾ ಮೇಲ್ವಿಚಾರಕರ ಮುಖಾಂತರ ಅಭ್ಯರ್ಥಿಯ ಹೆಸರು, ವಿಳಾಸ, ನೋಂದಣಿ ಸಂಖ್ಯೆ, ಇತ್ಯಾದಿಗಳನ್ನು ನಮೂದಿಸಿರುವ ಲಿಖಿತ ಮನವಿಯನ್ನು ಪರೀಕ್ಷಾ ಮೇಲ್ವಿಚಾರಕರಿಗೆ ಸಲ್ಲಿಸಿ ಸ್ವೀಕೃತಿ(Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರ ಬಿಟ್ಟ ನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ. ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ದೋಷ ಕಂಡುಬಂದಲ್ಲಿ ಅದನ್ನು ತಕ್ಷಣ ಮೇಲ್ವಿಚಾರಕರ ಗಮನಕ್ಕೆ ತಂದು ಅದನ್ನು ಸರಿಪಡಿಸಿಕೊಳ್ಳಬೇಕು. ಪರೀಕ್ಷೆ ಮುಗಿದ ನಂತರ ಅದರ ಬಗ್ಗೆ ನೇಮಕಾತಿ ಸಮಿತಿಯ ಗಮನಕ್ಕೆ ತಂದರೆ ಅಂತಹ ಆಕ್ಷೇಪಣೆಗಳನ್ನು ಪರಿಗಣಿಸುವುದಿಲ್ಲ.